**<u>ವಿಧಾನ ಪರಿಷತ್ತು ಸದಸ್ಯರಾದ ಮಾನ್ಯ ಶ್ರೀ ಮರಿತಿಬ್ಬೇಗೌಡ ಇವರು ಮಂಡಿಸಿರುವ ನಿಯಮ-72ಕ್ಕೆ ಉತ್ತರ</u>**

**ವಿಷಯ:-**

**ಅನುದಾನಿತ ಪ್ರಾಥಮಿಕ, ಪ್ರೌಢ ಹಾಗೂ ಪದವಿಪೂರ್ವ ಕಾಲೇಜುಗಳಲ್ಲಿ ಜನವರಿ 2016 ರಿಂದ ಇದುವರೆವಿಗೂ ಸಾಕಷ್ಟು ಬೋಧಕ/ಬೋಧಕೇತರ ಹುದ್ದೆಗಳು, ನಿವೃತ್ತಿ, ರಾಜೀನಾಮೆ ಇನ್ನಿತರೆ ಕಾರಣಗಳಿಂದ ಖಾಲಿ ಬಿದ್ದಿವೆ. ಖಾಲಿ ಇರುವ ಸದರಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಸರ್ಕಾರ ಅನುಮತಿ ನೀಡದೆ ಇರುವುದರಿಂದ ಅನುದಾನಿತ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳ ಬೋಧನೆಗೆ ತುಂಬಾ ತೊಂದರೆಯಾಗುತ್ತಿದೆ. ಅಲ್ಲದೆ ಕೆಲವು ಶಾಲಾ ಕಾಲೇಜುಗಳನ್ನು ಮುಚ್ಚುವ ಪರಿಸ್ಥಿತಿ ಉಂಟಾಗಿರುವ ಗಂಭೀರ ಸಮಸ್ಯೆಯ ಕುರಿತು ಪ್ರಸ್ತಾಪಿಸಿರುತ್ತಾರೆ.**

**ಉತ್ತರ:**

ಅನುದಾನಿತ ಪ್ರೌಢಶಾಲೆ ಮತ್ತು ಪದವಿಪೂರ್ವ ಕಾಲೇಜುಗಳಲ್ಲಿ ನಿವೃತ್ತಿ, ರಾಜೀನಾಮೆ, ಮರಣ ಹಾಗೂ ಇನ್ನಿತರೆ ಕಾರಣಗಳಿಂದ ದಿನಾಂಕ:31.12.2015ರವರೆಗೆ ತೆರವಾಗಿರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡಲಾಗಿದೆ.

ಅನುದಾನಿತ ಪ್ರೌಢಶಾಲೆ ಮತ್ತು ಪದವಿಪೂರ್ವ ಕಾಲೇಜುಗಳಲ್ಲಿ ನಿವೃತ್ತಿ, ರಾಜೀನಾಮೆ, ಮರಣ ಹಾಗೂ ಇನ್ನಿತರೆ ಕಾರಣಗಳಿಂದ ದಿನಾಂಕ:01.01.2016 ರಿಂದ 31.12.2020ರವರೆಗೆ ಖಾಲಿ ಇರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡಲು ಆರ್ಥಿಕ ಇಲಾಖೆಯ ಸಹಮತಿ ಕೋರಿ ಪ್ರಸ್ತಾವನೆ ಸಲ್ಲಿಸಲಾಗಿದೆ.

**ಸಂಖ್ಯೆ: ಇಪಿ 137 ಎಸ್‌ಇಎಸ್ 2024**

**(ಎಸ್ ಮಧುಬಂಗಾರಪ್ಪ)**
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ**
**ಇಲಾಖಾ ಸಚಿವರು**